ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 11 ನೇ ಮಾರ್ಚ್, 2020

ರಾಜ್ಯದಲ್ಲಿ ಅತಿವೃಷ್ಠಿಯಿಂದ ಹಾನಿಗೊಳಗಾಗಿದ್ದು, ಪರಿಹಾರದ ಬಗ್ಗೆ

ಶ್ರೀ ಹೆಚ್.ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :-

628 (620) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ 2019-20ನೇ ಸಾಲಿನಲ್ಲಿ ಅತಿವೃಷ್ಠಿಯಿಂದ ಹಾನಿಗೊಳಗಾದ ಜಿಲ್ಲೆಗಳಾವುವು ; ಪ್ರವಾಹ ಪೀಡಿತ ಜನರಿಗೆ ಸೂಕ್ತ ಪರಿಹಾರ ಒದಗಿಸಲು ಕ್ರಮಕೈಗೊಳ್ಳಲಾಗಿದೆಯೇ ;

(ಆ) ರಾಜ್ಯದ ಪ್ರವಾಹ ಪೀಡಿತ ಪ್ರದೇಶಗಳಿಗೆ ಕೇಂದ್ರದ ಪರಿಹಾರ ನಿಧಿಯಿಂದ ಬಂದ ಹಣವೆಷ್ಟು ; ಇದನ್ನು ಪೂರ್ಣವಾಗಿ ಬಳಕೆ ಮಾಡಿಕೊಳ್ಳಲಾಗಿದೆಯೇ ;

(ಇ) ರಾಜ್ಯ ಸರ್ಕಾರದಿಂದ ಪ್ರವಾಹ ಪೀಡಿತ ಪ್ರದೇಶಗಳಿಗೆ ಬಿಡುಗಡೆ ಮಾಡಿದ ಹಣವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಪ್ರವಾಹ ಪೀಡಿತ ಜನರಿಗೆ ಪುನರ್ವಸತಿ ಕಲ್ಪಿಸಲಾಗಿದೆಯೇ ; (ಜಿಲ್ಲಾವಾರು ವಿವರ ನೀಡುವುದು)

(ಉ) ಪ್ರವಾಹದಿಂದ ಇದುವರೆಗೆ ಎಷ್ಟು ಜನ ಮರಣ ಹೊಂದಿರುತ್ತಾರೆ? (ಪೂರ್ಣ ವಿವರಗಳನ್ನು ನೀಡುವುದು)